## ಕರ್ನಾಟಕ ಲೋಕಾಯುಕ್ತ

ನಂ. ಕಂಪ್ಲೆಂಟ್/ಉಪಲೋಕ್/ಎಂವೈಎಸ್/1880/2021 ಬಹುಮಹಡಿಗಳ ಕಟ್ಟಡ,
ಮಂಡನಾಧಿಕಾರಿಗಳ ಶಾಖೆ, ಪಿ.ಒ. ಎ.ಆರ್.ಇ.17 ಡಾ: ಅಂಬೇಡ್ಕರ್ ವೀದಿ, ಬೆಂಗಳೂರು,
ದಿನಾಂಕ: 20/04/2022

### ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 12(3)ರ ಅನ್ವಯ ವರದಿ

*****

ವಿಷಯ: ಸರ್ಕಾರಿ ನೌಕರರಾದ ಶ್ರೀ ಹೆಚ್. ವಿ. ಸತ್ಯನಾರಾಯಣ ತಂದೆ ಲೇಟ್ ಹೆಚ್ ವೆಂಕಟೇಶಮೂರ್ತಿ, ರಾಜಸ್ವ ನಿರೀಕ್ಷಕರು, 3ನೇ ವೃತ್ತ, ಕೊತ್ತತ್ತಿ ಹೋಬಳಿ, ಮಂಡ್ಯ ತಾಲ್ಲೂಕು ಮತ್ತು ಜಿಲ್ಲೆ ರವರು ಕರ್ತವ್ಯ ಲೋಪ/ದುರ್ನಡತೆ ಎಸಗಿರುವ ಬಗ್ಗೆ.

*****

1) ಪೊಲೀಸ್ ಅಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ದಕ್ಷಿಣ ವಲಯ, ಮೈಸೂರು ಇವರು ಮಂಡ್ಯ ಜಿಲ್ಲೆಯ ಭ್ರಷ್ಟಾಚಾರ ನಿಗ್ರಹ ದಳ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕರು (ಇನ್ನು ಮುಂದೆ ತನಿಖಾಧಿಕಾರಿ ಎಂದು ಕರೆಯಲ್ಪಡುತ್ತಾರೆ) ಸಲ್ಲಿಸಿದ ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿದಾಗ ವರದಿಯಲ್ಲಿ ಶ್ರೀ ಹೆಚ್. ವಿ. ಸತ್ಯನಾರಾಯಣ ತಂದೆ ಲೇಟ್ ಹೆಚ್ ವೆಂಕಟೇಶಮೂರ್ತಿ, ರಾಜಸ್ವ ನಿರೀಕ್ಷಕರು, 3ನೇ ವೃತ್ತ, ಕೊತ್ತತ್ತಿ ಹೋಬಳಿ, ಮಂಡ್ಯ ತಾಲ್ಲೂಕು ಮತ್ತು ಜಿಲ್ಲೆ (ಇನ್ನು ಮುಂದೆ 'ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರನ್ನು ಶ್ರೀ ಹೆಚ್. ಟಿ. ರಮೇಶ್ ತಂದೆ ಲೇ. ತಿಮ್ಮೇಗೌಡ, ವಾಸ: ತಿಮ್ಮನಹೊಸೂರು ಗ್ರಾಮ, ಕೊತ್ತತ್ತಿ ಹೋಬಳಿ, ಮಂಡ್ಯ ತಾಲ್ಲೂಕು, ಮಂಡ್ಯ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಭೇಟಿ ಮಾಡಿದಾಗ ಲಂಚದ ಹಣಕ್ಕೆ ಬೇಡಿಕೆ ಇಟ್ಟು, ಅದನ್ನು ಪಡೆದು ದುರ್ನಡತೆ ತೋರಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 7 (2) ರನ್ವಯ ಗೌರವಾನ್ವಿತ ಉಪಲೋಕಾಯುಕ್ತರವರು ಸ್ವಯಂ ಪ್ರೇರಿತ ತನಿಖೆ ಕೈಗೊಂಡಿರುತ್ತಾರೆ.

2) **ದೂರಿನ ಸಂಕ್ಷಿಪ್ತ ವಿವರಣೆ:-** ದೂರುದಾರರ ತಂದೆ ಲೇಟ್ ತಿಮ್ಮೇಗೌಡ ಮತ್ತು ಚಿಕ್ಕಪ್ಪ ದೊಳ್ಳೇಗೌಡ ಇವರ ಹೆಸರಿನಲ್ಲಿ ಕೊತ್ತತ್ತಿ ಹೋಬಳಿ, ತಿಮ್ಮನಹೊಸೂರು ಗ್ರಾಮದ ಸರ್ವೆ ನಂ. 06 ರಲ್ಲಿರುವ 37-08 ಗುಂಟೆ ಜಮೀನನ್ನು ವಿಭಾಗ ಪತ್ರದಂತೆ ಖಾತೆ

ಮಾಡಿಸಿಕೊಡಲು ಸರ್ವೆ ಮತ್ತು ಸ್ಕೆಚ್‌ಗಾಗಿ ಸರ್ವೆ ಇಲಾಖೆಗೆ ಅರ್ಜಿ ಸಲ್ಲಿಸಿದ್ದು, ಸದರಿ ಅರ್ಜಿಯು ಎದುರುದಾರರ ಬಳಿ ಬಂದಿದ್ದು, ದೂರುದಾರರು ಎದುರುದಾರರನ್ನು ಭೇಟಿ ಮಾಡಿದಾಗ ಸರ್ವೆ ಮತ್ತು ಸ್ಕೆಚ್ ಮಾಡಿಸಿಕೊಡಲು ರೂ. 10,000/- ಗಳ ಲಂಚದ ಹಣಕ್ಕಾಗಿ ಒತ್ತಾಯಿಸಿರುತ್ತಾರೆ. ದೂರುದಾರರಿಗೆ ಸದರಿ ಲಂಚದ ಹಣ ನೀಡಲು ಇಷ್ಟವಿಲ್ಲದ ಕಾರಣ, ದೂರುದಾರರು ಮಂಡ್ಯ ಜಿಲ್ಲೆ ಎ.ಸಿ.ಬಿ. ಪೊಲೀಸ್ ಠಾಣೆಗೆ ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿದ ಸಂಭಾಷಣೆಯೊಂದಿಗೆ ದೂರನ್ನು 04/11/2016 ರಂದು ನೀಡಿರುತ್ತಾರೆ. ಈ ಬಗ್ಗೆ ಮಂಡ್ಯ ಎ.ಸಿ.ಬಿ. ಠಾಣೆಯ ಅಧಿಕಾರಿಗಳು ದೂರನ್ನು ಪಡೆದು ತಮ್ಮ ಠಾಣೆಯ ಗುನ್ನೆ ನಂ. 03/2016 ರಲ್ಲಿ ಪ್ರಕರಣ ನೋಂದಾಯಿಸಿಕೊಂಡಿರುತ್ತಾರೆ.

3) ತನಿಖಾಧಿಕಾರಿಗಳು ದಿನಾಂಕ 04/11/2016 ರಂದು ನೆರಳು ಸಾಕ್ಷಿ ಹಾಗೂ ಸಹ ಪಂಚರನ್ನು ಬರ ಮಾಡಿಕೊಂಡು ದೂರುದಾರರನ್ನು ಪರಿಚಯಿಸಿ, ಅವರಿಂದ ದೂರಿನ ವಿಷಯವನ್ನು ತಿಳಿದ ನಂತರ ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿದ ಸಂಭಾಷಣೆಯನ್ನು ಲ್ಯಾಪ್‌ಟಾಪ್‌ನಿಂದ ಸಿ.ಡಿ.ಗೆ ವರ್ಗಾಯಿಸಿಕೊಂಡು ದೂರನ್ನು ಸಲ್ಲಿಸಿದ್ದು, ಸದರಿ ಸಿ.ಡಿ.ಯನ್ನು ಪಂಚರಿಗೆ ಕೇಳಿಸಿ, ಲಖೀಕರಣ ಮಾಡಿ ವಶಪಡಿಸಿಕೊಂಡಿರುತ್ತಾರೆ. ನಂತರ ಲಂಚದ ಹಣ ರೂ. 10,000/- ದೂರುದಾರರು ಹಾಜರುಪಡಿಸಿದ್ದು ಅವುಗಳ ಮುಖಬೆಲೆ ಮತ್ತು ನೋಟಿನ ಸಂಖ್ಯೆ ಪ್ರತ್ಯೇಕ ಹಾಳೆಯಲ್ಲಿ ನಮೂದಿಸಿ ಪಂಚರ ಮತ್ತು ತನಿಖಾಧಿಕಾರಿಗಳ ಸಹಿ ಪಡೆದಿರುತ್ತಾರೆ. ಸದರಿ ಹಣಕ್ಕೆ ಫಿನಾಪ್ತಲಿನ್ ಪೌಡರ್ ಲೇಪಿಸಿ ಸೋಡಿಯಂ ಕಾರ್ಬೋನೇಟ್ ದ್ರಾವಣ ತಯಾರಿಸಿ ಸದರಿ ದ್ರಾವಣದಲ್ಲಿ ನೋಟುಗಳಿಗೆ ಫಿನಾಪ್ತಲಿನ್ ಪೌಡರ್ ಲೇಪಿಸಿದ ಪಂಚನ ಕೈ ಬೆರಳುಗಳನ್ನು ದ್ರಾವಣದಲ್ಲಿ ಅದ್ದಿ ತೆಗೆದಾಗ ಅದು ತಿಳಿ ಗುಲಾಬಿ ಬಣ್ಣಕ್ಕೆ ಬಂದಿರುತ್ತದೆ. ಈ ಬಗ್ಗೆ ಮಾದರಿ ದ್ರಾವಣ ಹಾಗೂ ಗುಲಾಬಿ ಬಣ್ಣಕ್ಕೆ ತಿರುಗಿದ ದ್ರಾವಣವನ್ನು ಪ್ರತ್ಯೇಕವಾಗಿ ವಶಪಡಿಸಿಕೊಂಡು ಹಂತ ಹಂತವಾಗಿ ಫೋಟೋಗಳನ್ನು ತೆಗೆಸಿ ಪ್ರಕರಣದ ಮಾಹಿತಿ ಗೌಪ್ಯತೆಯನ್ನು ಕಾಪಾಡಿಕೊಳ್ಳಲು ತನಿಖಾಧಿಕಾರಿಯವರು ಸೂಚಿಸಿರುತ್ತಾರೆ. ಶ್ರೀ ರಾಧಾಕೃಷ್ಣ ಬಿ.ಎ. ಬಿನ್ ಲೇಟ್ ಅಶ್ವಥ್‌ನಾರಾಯಣ, ದ್ವಿ.ದ.ಸ. ಪ್ರಾದೇಶಿಕ ಕಛೇರಿ, ಮಂಡ್ಯ ಇವರನ್ನು ನೆರಳು ಸಾಕ್ಷಿಯಾಗಿ ನೇಮಿಸಿ ದೂರುದಾರರೊಂದಿಗೆ ಎದುರುದಾರರ ಬಳಿ ಹೋಗಿ ಅವರಿಗೆ ಅನುಮಾನ ಬಾರದಂತೆ ಮತ್ತು ಎದುರುದಾರರು ಹಾಗೂ ದೂರುದಾರರ ನಡುವೆ ನಡೆದ ಸಂಭಾಷಣೆಯನ್ನು ಕೇಳಿಸಿಕೊಂಡು ಘಟನೆಯನ್ನು ವೀಕ್ಷಿಸಿ, ಎದುರುದಾರರು ಹಣವನ್ನು ಕೇಳಿ

ಪಡೆದುಕೊಂಡರೆ, ಹಣವನ್ನು ಹೇಗೆ ಪಡೆದುಕೊಳ್ಳುತ್ತಾರೆ, ಹಣವನ್ನು ಎಲ್ಲಿ ಇಟ್ಟುಕೊಳ್ಳುತ್ತಾರೆ ಎಂಬುದನ್ನು ಗಮನಿಸಿ ನಂತರ ತಿಳಿಸಬೇಕೆಂದು ತನಿಖಾಧಿಕಾರಿಗಳು ದೂರುದಾರರಿಗೆ ತಿಳಿಸಿರುತ್ತಾರೆ. ಘಟನೆಯ ಕಾಲದಲ್ಲಿ ಎದುರುದಾರರು ಲಂಚದ ಹಣಕ್ಕಾಗಿ ಬೇಡಿಕೆ ಇಟ್ಟಾಗ ಮತ್ತು ಪಡೆದಾಗ ಆಗ ನಡೆಯುವ ಸಂಭಾಷಣೆಯನ್ನು ಮೊಬೈಲ್‌ನಲ್ಲಿ ಧ್ವನಿ ಮುದ್ರಣ ಮಾಡಿಕೊಳ್ಳುವಂತೆ ತನಿಖಾಧಿಕಾರಿಗಳು ಸೂಚಿಸಿರುತ್ತಾರೆ. ಈ ಬಗ್ಗೆ ಸವಿಸ್ತಾರ ಪ್ರಾಯೋಗಿಕ ಪಂಚನಾಮೆಯನ್ನು ಮಧ್ಯಾಹ್ನ 2-15 ರಿಂದ ಸಾಯಂಕಾಲ 4-00 ಘಂಟೆಯವರೆಗೆ ಪೊಲೀಸ್ ಠಾಣೆಯಲ್ಲಿ ನಿರ್ವಹಿಸಿರುತ್ತಾರೆ.

4) ದಿನಾಂಕ 04/11/2016 ರಂದು ಮಂಡ್ಯ ಸಿಟಿ ಸುಭಾಷ್ ನಗರ, 5ನೇ ಅಡ್ಡರಸ್ತೆ, ಲೇಟ್ ಕೆಂಚಮ್ಮ ಬಿಲ್ಡಿಂಗ್‌ನಲ್ಲಿರುವ ಎದುರುದಾರರ ಖಾಸಗಿ ಕಚೇರಿಯಲ್ಲಿ ನೆರಳು ಸಾಕ್ಷಿ ಶ್ರೀ ರಾಧಾಕೃಷ್ಣ ಬಿ.ಎ. ಬಿನ್ ಲೇಟ್ ಅಶ್ವಥ್‌ನಾರಾಯಣರವರೊಂದಿಗೆ ದೂರುದಾರರು ಹೋದಾಗ ಎದುರುದಾರರು ಲಂಚದ ಹಣವನ್ನು ಕೇಳಿ ತಮ್ಮ ಬಲಗೈನಿಂದ ಪಡೆದುಕೊಂಡು ಎರಡೂ ಕೈಗಳಿಂದ ಎಣಿಸಿ, ಬಲಗೈನಿಂದ ಎದುರುದಾರರು ಧರಿಸಿದ್ದ ಶರ್ಟಿನ ಎಡಭಾಗದ ಜೇಬಿನಲ್ಲಿ ಇಟ್ಟುಕೊಂಡಿರುತ್ತಾರೆ. ನಂತರ ದೂರುದಾರರು ಎದುರುದಾರರ ಖಾಸಗಿ ಕಛೇರಿಯಿಂದ ಹೊರಬಂದು ತಮ್ಮ ಕರ್ಚೀಫ್‌ನಿಂದ ಮುಖವನ್ನು ಒರೆಸಿಕೊಳ್ಳುವ ಮೂಲಕ ಸಂಜ್ಞೆಯನ್ನು ನೀಡಿರುತ್ತಾರೆ. ತಕ್ಷಣ ಜೊತೆಯಲ್ಲಿದ್ದ ಕೊ-ಪಂಚ ಉಳಿದ ಸಿಬ್ಬಂದಿ ಮತ್ತು ತನಿಖಾಧಿಕಾರಿಯವರು ಎದುರುದಾರರ ಖಾಸಗಿ ಕಛೇರಿಯ ಒಳಗೆ ಬಂದು ಎದುರುದಾರರಿಗೆ ತಮ್ಮ ಹಾಗೂ ಪಂಚರ ಪರಿಚಯ ನೀಡಿ, ದೂರುದಾರರಿಗೆ ಅಲ್ಲಿಯ ನಡುವಳಿಕೆಗಳನ್ನು ಕೇಳಿ ತಿಳಿದುಕೊಂಡಿರುತ್ತಾರೆ. ಆಗ ದೂರುದಾರರು ಫಿನಾಫ್ತಲಿನ್ ಲೇಪಿತ ಲಂಚದ ಹಣ ರೂ. 10,000/- ಗಳನ್ನು ಬೇಡಿ ಪಡೆದು ಎದುರುದಾರರು ತಾವು ಧರಿಸಿದ್ದ ಶರ್ಟಿನ ಎಡಭಾಗದ ಜೇಬಿನಲ್ಲಿ ಇಟ್ಟುಕೊಂಡಿರುವುದಾಗಿ ತಿಳಿಸಿದ್ದು, ಆಗ ತನಿಖಾಧಿಕಾರಿಗಳು ಎದುರುದಾರರಿಗೆ ಸದರಿ ಲಂಚದ ಹಣ ಹಾಜರುಪಡಿಸುವಂತೆ ಕೋರಿದಾಗ ಎದುರುದಾರರು ತಾವು ಧರಿಸಿದ್ದ ಶರ್ಟಿನ ಎಡಭಾಗದ ಜೇಬಿನಿಂದ ಲಂಚದ ಹಣವನ್ನು ಹಾಜರುಪಡಿಸಿದ್ದು, ಸದರಿ ನೋಟುಗಳ ಮುಖಬೆಲೆ ಹಾಗೂ ಕ್ರಮ ಸಂಖ್ಯೆ ಪ್ರಾಯೋಗಿಕ ಪಂಚನಾಮೆ ಕಾಲಕ್ಕೆ ಬರೆದುಕೊಂಡಂತಹ ನೋಟುಗಳ ಮುಖಬೆಲೆ ಮತ್ತು ಕ್ರಮ ಸಂಖ್ಯೆಯು ತಾಳೆಯಾಗಿದ್ದು ಇರುತ್ತದೆ. ತನಿಖಾಧಿಕಾರಿಗಳು ಎದುರುದಾರರ ಎರಡೂ ಕೈಗಳನ್ನು ಪ್ರತ್ಯೇಕವಾಗಿ ಸೋಡಿಯಂ ಕಾರ್ಬೋನೇಟ್

ದ್ರಾವಣದಲ್ಲಿ ಅದ್ದಿದಾಗ ಸದರಿ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ತಿರುಗಿದ್ದು ಸದರಿ ದ್ರಾವಣಗಳನ್ನು ಪ್ರತ್ಯೇಕ ಪ್ಲಾಸ್ಟಿಕ್ ಬಾಟಲ್‌ಗಳಲ್ಲಿ ಸಂಗ್ರಹಿಸಿ ಸೀಲ್ ಮಾಡಿ ವಶಪಡಿಸಿಕೊಂಡಿರುತ್ತಾರೆ. ಪ್ರಾಯೋಗಿಕ ಪಂಚನಾಮೆಯ ಕಾಲದಲ್ಲಿ ದೂರುದಾರರು ಹಾಜರುಪಡಿಸಿದ್ದ ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿದಂತಹ ಧ್ವನಿ ಸುರುಳಿಯನ್ನು ಲ್ಯಾಪ್‌ಟಾಪ್‌ಗೆ ಹಾಕಿ ಕೇಳಿಸಿದಾಗ ಎದುರುದಾರರ ಮೇಲಾಧಿಕಾರಿಯಾದ ಶ್ರೀ ನಂಜುಂಡಸ್ವಾಮಿ ಬಿ. ಉಪ ತಹಶೀಲ್ದಾರ, ತಗ್ಗಹಳ್ಳಿ ನಾಡಕಛೇರಿ, ಮಂಡ್ಯ ತಾಲ್ಲೂಕು ಮತ್ತು ಜಿಲ್ಲೆ ಇವರು ಎದುರುದಾರರ ಧ್ವನಿಯನ್ನು ಗುರುತಿಸಿರುತ್ತಾರೆ. ಎದುರುದಾರರಿಗೆ ಬದಲಿ ಶರ್ಟಿನ ವ್ಯವಸ್ಥೆ ಮಾಡಿ ಅವರು ಧರಿಸಿದ್ದ ಶರ್ಟನ್ನು ಪಡೆದು ಶರ್ಟಿನ ಎಡಭಾಗದ ಜೇಬನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ ಅದು ತಿಳಿ ಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿದ್ದು, ಸದರಿ ದ್ರಾವಣವನ್ನು ಪ್ರತ್ಯೇಕವಾಗಿ ವಶಪಡಿಸಿಕೊಂಡಿರುತ್ತಾರೆ ಹಾಗೂ ಫಿನಾಪ್ತಲಿನ್ ಲೇಪಿತ ಲಂಚದ ಹಣವನ್ನು ಇಟ್ಟುಕೊಂಡಂತಹ ಎದುರುದಾರರ ಶರ್ಟನ್ನೂ ಸಹ ವಶಪಡಿಸಿಕೊಂಡಿರುತ್ತಾರೆ. ದೂರಿಗೆ ಸಂಬಂಧಪಟ್ಟ ದಾಖಲಾತಿಗಳನ್ನು ಉಪತಹಶೀಲ್ದಾರ್ ರವರಿಂದ ಮೂಲ ದಾಖಲಾತಿಗಳನ್ನು ಪಡೆದು ಅವುಗಳ ಜೆರಾಕ್ಸ್ ಪ್ರತಿಗಳನ್ನು ಪಡೆದು ದೃಢೀಕೃತಗೊಳಿಸಿ ತನಿಖಾಧಿಕಾರಿಗಳು ಪಡೆದಿರುತ್ತಾರೆ. ಈ ಪ್ರಕ್ರಿಯೆ ಬಗ್ಗೆ ಹಂತ ಹಂತವಾಗಿ ಛಾಯಾಚಿತ್ರಗಳನ್ನು ತೆಗೆದಿರುತ್ತಾರೆ. ಈ ಘಟನೆಯ ಬಗ್ಗೆ ಎದುರುದಾರರಿಗೆ ಲಿಖಿತ ರೂಪದಲ್ಲಿ ಏನಾದರೂ ಹೇಳುವುದಿದ್ದರೆ ಬರೆದುಕೊಡುವಂತೆ ತನಿಖಾಧಿಕಾರಿಯವರು ತಿಳಿಸಿದ್ದು ಅದಕ್ಕೆ ಎದುರುದಾರರು "ನಾನು 10,000/- ರೂಪಾಯಿಗಳನ್ನು ರಮೇಶ ರವರಿಂದ ಅವರ ತಂದೆ ತಿಮ್ಮೇಗೌಡ ರವರ ಖಾತೆಯ ಬಾಬ್ತು ಕಂದಾಯ ಕಟ್ಟಲು ಕೊಟ್ಟಿದ್ದು ಇದನ್ನು ಗ್ರಾಮ ಲೆಕ್ಕಿಗರಿಂದ ರಸೀದಿ ಹಾಕಿಸಿಕೊಡಬೇಕೆಂದು ಹೇಳಿದ್ದು, ಅದಕ್ಕಾಗಿ ಈ ಹಣವನ್ನು ಪಡೆದಿರುತ್ತೇನೆ" ಎಂದು ಸಮಜಾಯಿಷಿ ನೀಡಿರುತ್ತಾರೆ. ಈ ಬಗ್ಗೆ ಸವಿಸ್ತಾರ ಪಂಚನಾಮೆಯನ್ನು ಸಾಯಂಕಾಲ 4-45 ರಿಂದ 7-00 ಘಂಟೆಯವರೆಗೆ ಜರುಗಿಸಿರುತ್ತಾರೆ.

5) ಸದರಿ ಹಣದ ಬಗ್ಗೆ ತನಿಖಾಧಿಕಾರಿಯು ಎದುರುದಾರರನ್ನು ವಿಚಾರಿಸಿದಾಗ ಸರಿಯಾದ, ತೃಪ್ತಿದಾಯಕವಾದ ಉತ್ತರ ಅಥವಾ ವಿವರಣೆ ಅಥವಾ ಲೆಕ್ಕ ನೀಡಿರುವುದಿಲ್ಲ.

6) ತನಿಖಾಧಿಕಾರಿಯವರು ಸವಿಸ್ತಾರ ಜಪ್ತಿ ಪಂಚನಾಮೆ ಪೂರೈಸಿದ ನಂತರ ಎದುರುದಾರರನ್ನು ದಸ್ತಗಿರಿ ಮಾಡಿರುತ್ತಾರೆ.

7) ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ ಹಾಗೂ ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ ಮತ್ತು ಇತರ ಅಂಶಗಳು, ಎದುರುದಾರರ ದುರ್ನಡತೆಯನ್ನು ತೋರಿಸುತ್ತದೆ.

೮) ಧ್ವನಿ ವಿಶ್ಲೇಷಣಾ ವರದಿಯಲ್ಲಿ ಮುದ್ರಿತ ಧ್ವನಿಯು ಎದುರುದಾರರ ಧ್ವನಿಯೊಂದಿಗೆ ತಾಳೆಯಾಗಿರುವುದು ದೃಢಪಟ್ಟಿರುತ್ತದೆ ಹಾಗೂ ರಾಸಾಯನಿಕ ತಜ್ಞರ ಪರೀಕ್ಷಾ ವರದಿಯಲ್ಲಿ ತನಿಖಾಧಿಕಾರಿಗಳು ಸಂಗ್ರಹಿಸಿದ ಮುದ್ದೇ ಮಾಲುಗಳಲ್ಲಿ ಪಿನಾಪ್ತಲಿನ್ ಅಂಶ ಇರುವುದು ದೃಢಪಟ್ಟಿರುತ್ತದೆ.

9) ಎದುರುದಾರರು ಪರಿವೀಕ್ಷಣಾ ಟಿಪ್ಪಣಿಗೆ ತಮ್ಮ ಸಮಜಾಯಿಷಿಯನ್ನು ದಿನಾಂಕ 23/12/2021 ರಂದು ಸಲ್ಲಿಸಿರುತ್ತಾರೆ. ಸದರಿಯವರು ತಮ್ಮ ಸಮಜಾಯಿಷಿಯಲ್ಲಿ "ದೂರುದಾರರು ಸಲ್ಲಿಸಿದ ಯಾವುದೇ ಅರ್ಜಿಯು ನನ್ನಲ್ಲಿ ಕ್ರಮಕ್ಕಾಗಿ ಬಾಕಿ ಇರಲಿಲ್ಲ. ಮತ್ತು ಸರ್ವೆ ನಕ್ಷೆ ತಯಾರಿಸುವ ಕರ್ತವ್ಯವೂ ನನ್ನ ಹುದ್ದೆಗೆ ಸಂಬಂಧಿಸಿದ ವಿಷಯವಲ್ಲ. ಆದಾಗ್ಯೂ ವೈಯಕ್ತಿಕ ಕಾರಣಗಳಿಗಾಗಿ ನನ್ನ ಮೇಲಿನ ವೈಮನಸ್ಸಿನಿಂದ ನನ್ನನ್ನು ಸಂಕಷ್ಟದಲ್ಲಿ ಸಿಲುಕಿಸುವ ಏಕೈಕ ಕಾರಣದಿಂದ ಇತರ ಕೆಲವು ವ್ಯಕ್ತಿಗಳ ಪ್ರಚೋದನೆಯಿಂದ ದೂರುದಾರರು ಎ.ಸಿ.ಬಿ.ಯ ಪೋಲೀಸ್ ಠಾಣೆಗೆ ನನ್ನ ವಿರುಧ್ಧ ಸುಳ್ಳು ದೂರನ್ನು ನೀಡಿರುತ್ತಾರೆ" ಎಂದು ಲಿಖಿತ ಸಮಜಾಯಿಷಿ ನೀಡಿರುತ್ತಾರೆ. ಸದರಿಯವರ ಸಮಜಾಯಿಷಿಯು ವ್ಯತಿರಿಕ್ತ ಸಮಜಾಯಿಷಿಯಾಗಿದ್ದು ಆಪಾದನೆಗಳನ್ನು ನಿರಾಕರಿಸಿರುವುದರ ಹೊರತಾಗಿ ಆಪಾದನೆಗಳನ್ನು ಅಲ್ಲಗೆಳೆಯಲು ಯಾವುದೇ ಪೂರಕ ದಾಖಲಾತಿಗಳನ್ನು ಸಲ್ಲಿಸಿರುವುದಿಲ್ಲ. ಆದ್ದರಿಂದ ಅವರು ನೀಡಿರುವ ಸಮಜಾಯಿಷಿ ಅಂಶಗಳ ಮೇರೆಗೆ ಪ್ರಕರಣವನ್ನು ಮುಕ್ತಾಯಗೊಳಿಸಲು ಸೂಕ್ತ ಕಾರಣಗಳು ಕಂಡುಬರುವುದಿಲ್ಲ.

10) ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ ಹಾಗೂ ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ ಮತ್ತು ಇತರ ಅಂಶಗಳು, ಎದುರುದಾರರ ಸತತವಾದ ದುರ್ನಡತೆಯನ್ನು ತೋರಿಸುತ್ತದೆ.

11) ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲಾತಿಗಳನ್ನು ಮತ್ತು ಎದುರುದಾರರು ನೀಡಿರುವ ಉತ್ತರಗಳನ್ನು ಕೂಲಂಕುಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರು ತಮ್ಮ ವಿರುಧ್ಧದ ನಡವಳಿಯನ್ನು ಕೈ ಬಿಡಲು

ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ತೋರಿಸಿಲ್ಲವೆಂದು ಅಭಿಪ್ರಾಯಕ್ಕೆ ಬರಲಾಗಿದೆ

12) ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡುಬರುತ್ತದೆ.

13) ಅದಲ್ಲದೆ ಎದುರುದಾರರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ (ಪ್ರಸ್ತುತ ಕರ್ನಾಟಕ ನಾಗರಿಕ ಸೇವಾ(ನಡತೆ) 2021 ನಿಯಮ 3 (1) (i) ರಿಂದ (iii) ರ ಅಡಿಯಲ್ಲಿ ದುರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ ಹಾಗೂ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14(ಎ) ರಡಿ ಈ ಸಂಸ್ಥೆಗೆ ವಹಿಸಬೇಕೆಂದೂ ಕೋರಿದೆ.

14) ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4) ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ **ಮೂರು ತಿಂಗಳೊಳಗೆ** ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

K.N. Phanindra 20/4/22

**(ನ್ಯಾಯಮೂರ್ತಿ ಕೆ. ಎನ್. ಫಣೀಂದ್ರ)**
ಉಪಲೋಕಾಯುಕ್ತರು -2
ಕರ್ನಾಟಕ ರಾಜ್ಯ, ಬೆಂಗಳೂರು.